**All India Radio: Bangalore**
**National Bulletin In Kannada**
**26.03.2025 19.35 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ರಾಮನವಮಿಯಂದು ಬಹುನಿರೀಕ್ಷಿತ ಪಂಬನ್ ರೈಲ್ವೇ ಸೇತುವೆ ಉದ್ಘಾಟನೆಗೆ ಸಕಲ ಸಿದ್ಧತೆ ; ಪ್ರಧಾನಿ ನರೇಂದ್ರ ಮೋದಿ ಭಾಗಿ
2. ವೇವ್ಸ್ ೨೦೨೫ ಮೇ೧ ರಿಂದ ಆರಂಭ; ಮಾಧ್ಯಮ ಪ್ರತಿನಿಧಿಗಳ ನೋಂದಾಣಿಗೆ ಅರ್ಜಿ ಆಹ್ವಾನ
3. ಕೇಂದ್ರ ಸರ್ಕಾರದ 'ಪೋಶನ್ ಬಿ ಪಡಾಯಿ ಬಿ' ಕಾರ್ಯಕ್ರಮದಡಿ ಪ್ರತಿಯೊಂದು ಮಗುವಿಗೂ ಸೌಲಭ್ಯ ಸಿಗುವಂತೆ ಕ್ರಮ
4. ಐಪಿಎಲ್ ಟಿ-೨೦ ಕ್ರಿಕೆಟ್; ರಾಜಸ್ಥಾನ್ ರಾಯಲ್ಸ್ - ಕೊಲ್ಕೊತ್ತಾ ನೈಟ್‌ರೈಡರ್ಸ್ ಮುಖಾಮುಖಿ

<><><><>

ರಾಮನವಮಿಯ ಶುಭ ಸಂದರ್ಭದಲ್ಲಿ ತಮಿಳುನಾಡಿನ ರಾಮೇಶ್ವರಂನಲ್ಲಿ ಹೊಸದಾಗಿ ನಿರ್ಮಿಸಲಾದ ಪಂಬನ್ ರೈಲ್ವೆ ಸೇತುವೆಯನ್ನು ಪ್ರಧಾನಿ ನರೇಂದ್ರ ಮೋದಿ ಏಪ್ರಿಲ್ ೬ ರಂದು ಉದ್ಘಾಟಿಸಲಿದ್ದಾರೆ. ಪಂಬನ್ ರೈಲ್ವೆ ಸೇತುವೆಯು ಪವಿತ್ರ ದ್ವೀಪವಾದ ರಾಮೇಶ್ವರಂಗೆ ಸಂಪರ್ಕವನ್ನು ಹೆಚ್ಚಿಸುವುದಲ್ಲದೆ, ಸಾವಿರಾರು ಯಾತ್ರಿಕರು ಮತ್ತು ಪ್ರವಾಸಿಗರಿಗೆ ಪ್ರಯಾಣವನ್ನು ಸುಗಮವಾಗಿಸಲಿದೆ. ಇದೇ ಸಂದರ್ಭ ಪ್ರಧಾನಿ ರಾಮೇಶ್ವರಂನಲ್ಲಿರುವ ಪ್ರಸಿದ್ಧ ರಾಮನಾಥಸ್ವಾಮಿ ದೇವಾಲಯಕ್ಕೂ ಭೇಟಿ ನೀಡುವ ನಿರೀಕ್ಷೆಯಿದ್ದು, ನಂತರ ದೆಹಲಿಗೆ ತೆರಳುವ ಮೊದಲು ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಮಾತನಾಡುವ ಸಾಧ್ಯತೆಯಿದೆ. ದಕ್ಷಿಣ ರೈಲ್ವೆಯ ಮೂಲಗಳ ಪ್ರಕಾರ, ಸಮಾರಂಭದಲ್ಲಿ ತಮಿಳುನಾಡು ಮುಖ್ಯಮಂತ್ರಿ ಎಂ.ಕೆ. ಸ್ಟಾಲಿನ್, ರಾಜ್ಯಪಾಲ ಆರ್.ಎನ್. ರವಿ, ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್, ತಮಿಳುನಾಡಿನ ಸಂಸತ್ ಸದಸ್ಯರು ಮತ್ತು ಶಾಸಕಾಂಗ ಸದಸ್ಯರು, ಬಿಜೆಪಿ ಪಕ್ಷದ ನಾಯಕರು ಮತ್ತು ಕಾರ್ಯಕರ್ತರು ಸೇರಿದಂತೆ ಹಲವಾರು ಗಣ್ಯರು ಭಾಗವಹಿಸಲಿದ್ದಾರೆ.

<><><><>

ವಿಶ್ವ ಧ್ವನಿ ಶ್ರವಣ ಮತ್ತು ಮನರಂಜನಾ ಶೃಂಗಸಭೆ ೨೦೨೫ ಇದೇ ಬರುವ ಮೇ೧ ರಿಂದ ಮೇ ೪ರವರೆಗೆ ವಾಣಿಜ್ಯ ನಗರಿ ಮುಂಬೈನಲ್ಲಿ ನಡೆಯಲಿದೆ. ಪ್ರಸ್ತುತ ಸಿದ್ಧತಾಕಾರ್ಯಗಳು ನಡೆಯುತ್ತಿದ್ದು, ಮಾಧ್ಯಮ ಪ್ರತಿನಿಧಿಗಳ ನೋಂದಾಣಿ ಇಂದಿನಿಂದ ಆರಂಭವಾಗಿದೆ. ವೇವ್ಸ್ ಕಾರ್ಯಕ್ರಮವನ್ನು ವರದಿ ಮಾಡಲು ಪತ್ರಕರ್ತರು, ಛಾಯಾಗ್ರಾಹಕರು, ವಿಶೇಷ ರಚನೆಕಾರರು, ಮತ್ತು ಮಾಧ್ಯಮ ವೃತ್ತಿಪರರನ್ನು ಆಹ್ವಾನಿಸಲಾಗಿದ್ದು, ಏಪ್ರಿಲ್ ೧೫ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕವಾಗಿದೆ. ವೇವ್ಸ್ ಶೃಂಗಸಭೆಯು ಜಗತ್ತಿನಾದ್ಯಂತದ ಕ್ರಿಯೇಟರ್‌ಗಳಿಗೆ ಪರಿಪೂರ್ಣ ವೇದಿಕೆಯಾಗುವುದಲ್ಲದೆ, ಜಾಗತಿಕ ಮನರಂಜನೆಯ ಭವಿಷ್ಯವನ್ನು ಬದಲಾಯಿಸುವ ವಿಶ್ವದ ಅತ್ಯಂತ ಶಕ್ತಿಶಾಲಿ ಸಭೆಯಾಗಿದೆ. ಅನಿಮೇಷನ್, ಗೇಮಿಂಗ್, ವಿಷುಯಲ್ ಎಫೆಕ್ಟ್ಸ್ ಮತ್ತು ಎಕ್ಸ್‌ಟೆಂಡೆಡ್ ರಿಯಾಲಿಟಿಯಲ್ಲಿ ಹೊಸ ಅವಕಾಶಗಳನ್ನು ಅನ್ವೇಷಿಸಲು ಕ್ರಿಯೇಟರ್‌ಗಳು, ಉದ್ಯಮಿಗಳು ಮತ್ತು ಹೂಡಿಕೆದಾರರನ್ನು ವೇವ್ಸ್ ಒಟ್ಟುಗೂಡಿಸಲಿದೆ. ಅನಿಮೇಷನ್, ವಿಷುಯಲ್ ಎಫೆಕ್ಟ್ಸ್, ಗೇಮಿಂಗ್, ಕಾಮಿಕ್ಸ್ ಮತ್ತು ಎಕ್ಸ್‌ಟೆಂಡೆಡ್ ರಿಯಾಲಿಟಿ ವಲಯಗಳಲ್ಲಿ ಭಾರತವನ್ನು ಜಾಗತಿಕ ಶಕ್ತಿ ಕೇಂದ್ರವನ್ನಾಗಿ ಮಾಡುವ ದೃಷ್ಟಿಕೋನದೊಂದಿಗೆ, ಈ ಶೃಂಗಸಭೆಯು ಕೌಶಲ್ಯ ಅಭಿವೃದ್ಧಿ, ಉದ್ಯಮಶೀಲತೆ ಮತ್ತು ಗಡಿಯಾಚೆಗಿನ ಸಹಯೋಗಗಳನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ. ಅರ್ಜಿ ಸಲ್ಲಿಸಲು app.wavesindia.org/register/media ಜಾಲತಾಣದಲ್ಲಿ ನೋಂದಣಿ ಮಾಡಿಕೊಳ್ಳಬಹುದು.

<><><><>

'ಪೋಶನ್ ಬಿ ಪಡಾಯಿ ಬಿ' ಕಾರ್ಯಕ್ರಮ ಪ್ರತಿಯೊಂದು ಮಗುವಿಗೂ ಸೌಲಭ್ಯ ಸಿಗುವಂತೆ ಮಾಡಲು ದೇಶಾದ್ಯಂತ ೩೬ ಸಾವಿರಕ್ಕೂ ಹೆಚ್ಚು ರಾಜ್ಯ ಮಟ್ಟದ ಮಾಸ್ಟರ್ ತರಬೇತುದಾರರು ಮತ್ತು ೩ ಲಕ್ಷಕ್ಕೂ ಹೆಚ್ಚು ಅಂಗನವಾಡಿ ಕಾರ್ಯಕರ್ತೆಯರಿಗೆ ತರಬೇತಿ ನೀಡಲಾಗಿದೆ. ಎಲ್ಲಾ ಅಂಗನವಾಡಿ ಕಾರ್ಯಕರ್ತೆಯರ ಕೌಶಲ್ಯಗಳನ್ನು ಉನ್ನತೀಕರಿಸಲು ಭಾರತ ಸರ್ಕಾರವು ಮೇ ೧೦, ೨೦೨೩ ರಂದು 'ಪೋಶನ್ ಬಿ ಪಡಾಯಿ ಬಿ' ಈ ಉಪಕ್ರಮ ಪ್ರಾರಂಭಿಸಲಾಗಿತ್ತು. ಅಂಗನವಾಡಿಯನ್ನು ಉತ್ತಮ ಗುಣಮಟ್ಟದ ಮೂಲಸೌಕರ್ಯ, ಆಟದ ಉಪಕರಣಗಳು ಮತ್ತು ಉತ್ತಮ ತರಬೇತಿ ಪಡೆದ ಅಂಗನವಾಡಿ ಕಾರ್ಯಕರ್ತೆಯರನ್ನು ಹೊಂದಿರುವ ಕಲಿಕಾ ಕೇಂದ್ರವಾಗಿ ಪರಿವರ್ತಿಸುವ ಮೊದಲ ಹೆಜ್ಜೆಯಾಗಿ ಅಂಗನವಾಡಿ ಕಾರ್ಯಕರ್ತೆಯರ ಸಾಮರ್ಥ್ಯ ವೃದ್ಧಿಯನ್ನು ಕಲ್ಪಿಸಲಾಗಿದೆ. ಅಂಗನವಾಡಿ ಕಾರ್ಯಕರ್ತರನ್ನು ಸಬಲೀಕರಣಗೊಳಿಸಲು ಮತ್ತು ದಿವ್ಯಾಂಗ ಮಕ್ಕಳು ಸೇರಿದಂತೆ ಎಲ್ಲಾ ಮಕ್ಕಳಿಗೆ ಅತ್ಯುತ್ತಮ ಕಲಿಕೆಯನ್ನು ಖಚಿತಪಡಿಸಿಕೊಳ್ಳಲು, ಈ ಸಚಿವಾಲಯವು ಎರಡು ಪಠ್ಯಕ್ರಮ ಚೌಕಟ್ಟುಗಳನ್ನು ಅಭಿವೃದ್ಧಿಪಡಿಸಿದೆ - "ನವಚೇತನ- ಹುಟ್ಟಿನಿಂದ ೩ ವರ್ಷದವರೆಗಿನ ಮಕ್ಕಳಿಗೆ ಆರಂಭಿಕ ಬಾಲ್ಯದ ಜ್ಞಾನಾರ್ಜನೆಗಾಗಿ ರಾಷ್ಟ್ರೀಯ ಚೌಕಟ್ಟು" ಮತ್ತು "ಆದರ್ಶಿಲಾ- ೩ ರಿಂದ ೬ ವರ್ಷದವರೆಗಿನ ಮಕ್ಕಳಿಗೆ ಆರಂಭಿಕ ಬಾಲ್ಯದ ಆರೈಕೆ ಮತ್ತು ಶಿಕ್ಷಣಕ್ಕಾಗಿ ರಾಷ್ಟ್ರೀಯ ಪಠ್ಯಕ್ರಮ" 'ಪೋಶನ್ ಬಿ ಪಡಾಯಿ ಬಿ' ಕಾರ್ಯಕ್ರಮದ ಅಡಿಯಲ್ಲಿ ಆಯೋಜಿಸಲಾಗಿದೆ.

<><><><>

ಕ್ಷಯರೋಗ ನಿರ್ಮೂಲನೆ ಮಾಡುವ ಭಾರತದ ಮಹತ್ವಾಕಾಂಕ್ಷೆಯ ಧ್ಯೇಯಕ್ಕೆ ಕೊಡುಗೆ ನೀಡಿದ್ದಕ್ಕಾಗಿ ಪ್ರಧಾನಿ ನರೇಂದ್ರ ಮೋದಿ ಕೃತಜ್ಞತೆಯನ್ನು ವ್ಯಕ್ತಪಡಿಸಿದ್ದಾರೆ. ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ಅವರ ಸಾಮಾಜಿಕ ಮಾಧ್ಯಮ ಪೋಸ್ಟ್‌ಗೆ ಪ್ರತಿಕ್ರಿಯಿಸಿದ ಅವರು, ತಳಮಟ್ಟದ ಪ್ರಯತ್ನಗಳಿಂದ ಆರೋಗ್ಯಕರ ಮತ್ತು ಕ್ಷಯ ಮುಕ್ತ ಭಾರತಕ್ಕೆ ದಾರಿ ಮಾಡಿಕೊಡುತ್ತಿದೆ ಎಂದು ಹೇಳಿದರು. ಕ್ಷಯರೋಗ ವಿರುದ್ಧದ ಹೋರಾಟದಲ್ಲಿ ಭಾಗಿಯಾಗಿರುವ ಪ್ರತಿಯೊಬ್ಬರನ್ನು ಶ್ಲಾಘಿಸಿದ ಪ್ರಧಾನಿ, ಅವರ ಪ್ರಯತ್ನವು ಕ್ಷಯರೋಗ ವಿರುದ್ಧದ ಹೋರಾಟವನ್ನು ಬಲಪಡಿಸುತ್ತಿದೆ, ಕ್ಷಯರೋಗ-ಮುಕ್ತ ಭಾರತಕ್ಕೆ ಕೊಡುಗೆ ನೀಡುವುದರ ಜೊತೆಗೆ ಆರೋಗ್ಯಕರ ರಾಷ್ಟ್ರವನ್ನು ಖಚಿತಪಡಿಸುತ್ತಿದೆ ಎಂದರು.

<><><><>

೨೦೨೩-೨೪ರ ಆರ್ಥಿಕ ವರ್ಷದಲ್ಲಿ ದೇಶದಲ್ಲಿ ೩೦೬ ವಿಶೇಷ ಚೇತನ ಮಕ್ಕಳು ಸೇರಿದಂತೆ ಒಟ್ಟು ನಾಲ್ಕು ಸಾವಿರಕ್ಕೂ ಹೆಚ್ಚು ಮಕ್ಕಳನ್ನು ದತ್ತು ತೆಗೆದುಕೊಳ್ಳಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯದ ರಾಜ್ಯ ಸಚಿವೆ ಸಾವಿತ್ರಿ ಠಾಕೂರ್ ಹೇಳಿದ್ದಾರೆ. ರಾಜ್ಯಸಭೆಯಲ್ಲಿ ಪೂರಕ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ನಾಲ್ಕು ಸಾವಿರ ೩೬೪ ಮಕ್ಕಳು ಸೇರಿದಂತೆ ೬೨ ಸಾವಿರ ೫೦೦ ಕ್ಕೂ ಹೆಚ್ಚು ಮಕ್ಕಳು ದೇಶಾದ್ಯಂತ ಮಕ್ಕಳ ಆರೈಕೆ ಸಂಸ್ಥೆಗಳಲ್ಲಿ ವಾಸಿಸುತ್ತಿದ್ದಾರೆ. ಈ ಮಕ್ಕಳಿಗೆ ಮಿಷನ್ ವಾತ್ಸಲ್ಯ ಯೋಜನೆಯಡಿಯಲ್ಲಿ ಬೆಂಬಲ ನೀಡಲಾಗಿದೆ ಎಂದರು. ಮಿಷನ್ ವಾತ್ಸಲ್ಯ ಯೋಜನೆಯಡಿಯಲ್ಲಿ ಸ್ಥಾಪಿಸಲಾದ ಮಕ್ಕಳ ಆರೈಕೆ ಸಂಸ್ಥೆಗಳು ವಯಸ್ಸಿಗೆ ಸೂಕ್ತವಾದ ಶಿಕ್ಷಣ, ವೃತ್ತಿಪರ ತರಬೇತಿ, ಮನರಂಜನೆ, ಆರೋಗ್ಯ ರಕ್ಷಣೆ ಮತ್ತು ಸಮಾಲೋಚನೆಗೆ ಪ್ರವೇಶವನ್ನು ಬೆಂಬಲಿಸುತ್ತವೆ ಎಂದರು.

<><><><>

ಉತ್ತರಾಖಂಡ ಪ್ರವಾಸೋದ್ಯಮ ಅಭಿವೃದ್ಧಿ ಮಂಡಳಿ-ಯುಟಿಡಿಬಿ ನೋಂದಣಿ ಪ್ರಕ್ರಿಯೆಯನ್ನು ಸುಗಮಗೊಳಿಸುವ ನಿಟ್ಟಿನಲ್ಲಿ ಭಾರತದ ಅತ್ಯಂತ ಮಹತ್ವದ ತೀರ್ಥಯಾತ್ರೆಗಳಲ್ಲಿ ಪ್ರಮುಖವಾದ ಚಾರ್ ಧಾಮ್ ಮತ್ತು ಹೇಮಕುಂಡ್ ಸಾಹಿಬ್ ಯಾತ್ರೆ-೨೦೨೫ಕ್ಕೆ ನೋಂದಾಯಿಸಲು ಆಧಾರ್ ದೃಢೀಕರಣ ಮತ್ತು ಇಕೆವೈಸಿಯನ್ನು ಪರಿಚಯಿಸಿದೆ. ಮಾರ್ಚ್ ೨೦ ರಂದು ನೋಂದಣಿ ಪ್ರಕ್ರಿಯೆ ಪ್ರಾರಂಭವಾಗಿದ್ದು, ಇಂದು ಬೆಳಿಗ್ಗೆ ೬ ಲಕ್ಷದ ೫೦ ಸಾವಿರಕ್ಕೂ ಹೆಚ್ಚು

ಯಾತ್ರಿಕರು ಈಗಾಗಲೇ ಆಧಾರ್ ಆಧಾರಿತ ಆನ್‌ಲೈನ್ ನೋಂದಣಿ ಸೌಲಭ್ಯವನ್ನು ಪಡೆದುಕೊಂಡಿದ್ದಾರೆ. ಯಾತ್ರಾರ್ಥಿಗಳು ನೋಂದಣಿಗೆ ಜಾಲತಾಣ registrationandtouristcare.uk.gov.in ಅವಲೋಕಿಸಬಹುದು. ಮತ್ತು "ಟೂರಿಸ್ಟ್ ಕೇರ್ ಉತ್ತರಾಖಂಡ್" ಮೊಬೈಲ್ ಅಪ್ಲಿಕೇಶನ್ ಮೂಲಕ ಈ ಸೌಲಭ್ಯವನ್ನು ಪಡೆಯಬಹುದಾಗಿದೆ. ಆಧಾರ್ ಆಧಾರಿತ ಡಿಜಿಟಲ್ ಪರಿಶೀಲನೆಯು ನೋಂದಣಿ ಪ್ರಕ್ರಿಯೆಯನ್ನು ವೇಗಗೊಳಿಸುತ್ತದೆ ಮತ್ತು ದಾಖಲೆಗಳನ್ನು ಕಡಿಮೆ ಮಾಡುತ್ತದೆ ಹಾಗೂ ತುರ್ತು ಪರಿಸ್ಥಿತಿಯನ್ನು ಉತ್ತಮವಾಗಿ ಪರಿಹರಿಸುವಲ್ಲಿ ಇದು ಸಹಾಯಕವಾಗಬಹುದು. ಜೊತೆಗೆ ಯಾತ್ರಾರ್ಥಿಗಳು ಮತ್ತು ಅಧಿಕಾರಿಗಳ ನಡುವಿನ ಸಮನ್ವಯವನ್ನು ಮತ್ತಷ್ಟು ಸುಧಾರಿಸಬಹುದು ಎಂದು ನಿರೀಕ್ಷಿಸಲಾಗಿದೆ.

<><><><>

ಭಾರತೀಯ ಸೈಬರ್ ಅಪರಾಧ ಸಮನ್ವಯ ಕೇಂದ್ರದ ವರದಿಗಳ ನಂತರ ಸರ್ಕಾರವು ಮಾಹಿತಿ ತಂತ್ರಜ್ಞಾನ ಮಧ್ಯವರ್ತಿ ನಿಯಮಗಳ ಅಡಿಯಲ್ಲಿ ಒಂದು ಸಾವಿರದ ೪೧೦ ಗೇಮಿಂಗ್ ಸೈಟ್‌ಗಳನ್ನು ನಿರ್ಬಂಧಿಸಿದೆ ಎಂದು ಎಲೆಕ್ಟ್ರಾನಿಕ್ ಮತ್ತು ಮಾಹಿತಿ ತಂತ್ರಜ್ಞಾನದ ಸಚಿವ ಅಶ್ವಿನಿ ವೈಷ್ಣವ್ ಸ್ಪಷ್ಟಪಡಿಸಿದ್ದಾರೆ. ಇಂದು ಲೋಕಸಭೆಯಲ್ಲಿ ಪೂರಕ ಪ್ರಶ್ನೆಗಳಿಗೆ ಉತ್ತರಿಸಿದ ಅವರು, ಬೆಟ್ಟಿಂಗ್ ಮತ್ತು ಜೂಜಾಟದ ವಿರುದ್ಧ ಚೌಕಟ್ಟನ್ನು ರೂಪಿಸುವ ಅಧಿಕಾರವನ್ನು ರಾಜ್ಯ ಸರ್ಕಾರವು ಹೊಂದಿದೆ ಎಂದರು. ಈ ನಿಟ್ಟಿನಲ್ಲಿ ಕೇಂದ್ರವು ಹಲವು ನಿರ್ಣಯಗಳನ್ನು ತೆಗೆದುಕೊಂಡಿದೆ. ಆನ್‌ಲೈನ್ ಗೇಮಿಂಗ್ ಸಂಬಂಧಿತ ಸಮಸ್ಯೆಗಳನ್ನು ನಿಭಾಯಿಸಲು ಕಾನೂನಿನ ೧೪ಸಿ ಚೌಕಟ್ಟು ಹಾಗೂ ಭಾರತೀಯ ನ್ಯಾಯ ಸಂಹಿತಾ ೧೧೨ರ ಕಾಯ್ದೆ ಅಡಿಯಲ್ಲಿಯೂ ಕ್ರಮ ಕೈಗೊಳ್ಳಲಾಗಿದೆ ಎಂದರು.

<><><><>

ಇಂಡಿಯನ್ ಪ್ರೀಮಿಯರ್ ಲೀಗ್-ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಇಂದು ರಾಜಸ್ಥಾನ್ ರಾಯಲ್ಸ್ ಮತ್ತು ಕೊಲ್ಕತ್ತ ನೈಟ್ ರೈಡರ್ಸ್ ತಂಡಗಳು ಮುಖಾಮುಖಿಯಾಗಿದೆ. ಪಂದ್ಯ ಈಗಾಗಲೇ ಆರಂಭಗೊಂಡಿದ್ದು, ರಾಜಸ್ಥಾನ್ ರಾಯಲ್ಸ್ ವಿರುದ್ಧ ಟಾಸ್ ಗೆದ್ದು ಕೊಲ್ಕತ್ತ ನೈಟ್ ರೈಡರ್ಸ್ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ. ಇತ್ತೀಚಿನ ವರದಿ ಬಂದಾಗ ರಾಜಸ್ಥಾನ್ ರಾಯಲ್ಸ್ ೧ ಓವರ್‌ಗಳಲ್ಲಿ ಯಾವುದೇ ವಿಕೆಟ್ ನಷ್ಟವಿಲ್ಲದೇ ೬ ರನ್ ಮಾಡಿ ಆಡುತ್ತಿದೆ.

<><><><>

೧೦ನೇ ಬ್ರಿಕ್ಸ್ ನೀತಿ ಯೋಜನಾ ಸಂವಾದವು ನಿನ್ನೆ ಬ್ರೆಝಿಲ್‌ನ ಬ್ರೆಸಿಲಿಯಾದಲ್ಲಿ ಮುಕ್ತಾಯಗೊಂಡಿದೆ. ಎರಡು ದಿನಗಳ ಸಂವಾದದಲ್ಲಿ ಬ್ರಿಕ್ಸ್ ಸದಸ್ಯ ರಾಷ್ಟ್ರಗಳಾದ ಬ್ರೆಝಿಲ್, ರಷ್ಯಾ, ಭಾರತ, ಚೀನಾ, ದಕ್ಷಿಣ ಆಫ್ರಿಕಾ ದೇಶಗಳ ನೀತಿ ಯೋಜಕರು ಪಾಲ್ಗೊಂಡಿದ್ದು, ಬ್ರಿಕ್ಸ್‌ನ ಇತ್ತೀಚಿನ ವಿಸ್ತರಣೆಯನ್ನು ಪ್ರತಿಬಿಂಬಿಸುವ ಅಭಿವೃದ್ಧಿಯ ಕುರಿತಂತೆ ಚರ್ಚಿಸಲಾಯಿತು. ಜಾಗತಿಕ ಆರೋಗ್ಯ ಸಹಕಾರ, ವಿಕಸನಗೊಳ್ಳುತ್ತಿರುವ ಅಂತರಾಷ್ಟ್ರೀಯ ವ್ಯಾಪಾರ ಮತ್ತು ಆರ್ಥಿಕ ಸಮಾವೇಶ, ಹವಾಮಾನ ಕ್ರಮ, ಕೃತಕ ಬುದ್ಧಿಮತ್ತೆ ,ಆಡಳಿತ ಮತ್ತು ಬಹುಪಕ್ಷೀಯ ಶಾಂತಿ, ಭದ್ರತಾ ಚೌಕಟ್ಟುಗಳ ಸುಧಾರಣೆಗಳ ಕುರಿತು ಸಂವಾದದಲ್ಲಿ ಚರ್ಚಿಸಲಾಯಿತು ಎಂದು ವಿದೇಶಾಂಗ ಸಚಿವಾಲಯವು ಹೇಳಿಕೆಯಲ್ಲಿ ತಿಳಿಸಿದೆ. ಭಾರತೀಯ ನಿಯೋಗದ ನೇತೃತ್ವವನ್ನು ವಿದೇಶಾಂಗ ಸಚಿವಾಲಯದ ನೀತಿ ಯೋಜನೆ ಮತ್ತು ಸಂಶೋಧನಾ ಜಂಟಿ ಕಾರ್ಯದರ್ಶಿ ರಘುರಾಮ್ ಎಸ್ ವಹಿಸಿದ್ದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>